ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "1995ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.2) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ಧರಾಮಯ್ಯ (ಹಣಕಾಸು ಮತ್ತು ಯೋಜನಾ ಸಚಿವರು) : ಮಾನ್ಯ ಅಧ್ಯಕ್ಷರೆ, 1995ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ. 2) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕ 1995

ಶ್ರೀ ಸಿದ್ಧರಾಮಯ್ಯ (ಹಣಕಾಸು ಮತ್ತು ಯೋಜನಾ ಸಚಿವರು) : ಮಾನ್ಯ ಅಧ್ಯಕ್ಷರೆ, 1995ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "1995ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ಧರಾಮಯ್ಯ (ಹಣಕಾಸು ಮತ್ತು ಯೋಜನಾ ಸಚಿವರು) : ಮಾನ್ಯ ಅಧ್ಯಕ್ಷರೆ, 1995ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ನಂ.೩) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಕರ್ನಾಟಕ ಧನ ವಿನಿಯೋಗ (ನಂ.2) ವಿಧೇಯಕ 1995

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಹಣಕಾಸು ಮತ್ತು ಯೋಜನಾ ಸಚಿವರು) : ಮಾನ್ಯ ಅಧ್ಯಕ್ಷರೆ, ಕಾಫಿ ಬೆಳೆಗಾರರಿಗೆ ಹಿಂದೆ 14 ಎಕರೆಯವರೆಗೆ ವಿನಾಯಿತಿ ಇದ್ದು ಅದನ್ನು ಸರ್ಕಾರ ಪರಿಗಣಿಸಿ ಮತ್ತೆ ಈಗ 15 ಎಕರೆಯವರೆಗೆ ರಿಯಾಯಿತಿ ಕೊಡಲಿಕ್ಕೆ ಸರ್ಕಾರ ಒಪ್ಪಿಕೊಂಡು, ಈಗ 15 ಎಕರೆಯವರಿಗೆ ಕಾಫಿ ಬೆಳೆಗಾರರಿಗೆ ವಿನಾಯಿತಿಯನ್ನು ನಾವು ಕೊಡುತ್ತಿದ್ದೇನೆ.

7.00 ಪಿ.ಎಂ

ಇದರ ಜೊತೆಗೆ 50 ಎಕರೆಯವರಿಗೆ ಸ್ಲಾಬ್‌ನಲ್ಲಿ ತೆರಿಗೆಯನ್ನು ಏನು ವಿಧಿಸಿದ್ದೇವೆ. ಈಗ ಪ್ರತಿ 5 ಎಕರೆ ಸ್ಲಾಬ್‌ನಲ್ಲಿ ಪ್ರತಿ ಹಂತದಲ್ಲಿ ಕೂಡ 250 ರೂಪಾಯಿಗಳನ್ನು ಕಡಿತ ಮಾಡುತ್ತಿದ್ದೇವೆ. ಇದು ಒಂದು ರಿಯಾಯಿತಿಯಾಗಿದೆ. ಇನ್ನೊಂದು ಪಾರ್ಟನರ್‌ಶಿನಲ್ಲಿ ಫರ್ಮ್‌ಅನ್ನು ಡೀಲರ್ ಎನ್ನುವಂತಹ ವ್ಯಾಪ್ತಿಯಲ್ಲಿ ತಂದಿತ್ತು. ಅದನ್ನು ಮತ್ತೆ ಡೀಲರ್ ಶಿಪ್ ವ್ಯಾಪ್ತಿಯಿಂದ ಆ ಫರ್ಮ್‌ಅನ್ನು ಕೈ ಬಿಡತಕ್ಕಂಥ ತೀರ್ಮಾನ ಮಾಡಿದ್ದೇವೆ. ಈ ಎರಡಕ್ಕೂ ಸಂಬಂಧಪಟ್ಟಂತೆ ಕರ್ನಾಟಕ ಮಾರಾಟ ತೆರಿಗೆ ಕಾಯಿದೆ, ಮತ್ತೆ ಕರ್ನಾಟಕ ವ್ಯವಸಾಯ ವರಮಾನ ತೆರಿಗೆ ಕಾಯಿದೆಗೆ ಕೂಡ ತಿದ್ದುಪಡಿಗಳನ್ನು ಸಂಬಂಧಪಟ್ಟಂತಹ ವಿಧಿಗಳಿಗೆ ತರುತ್ತೇವೆನ್ನುವಂತಹ ಮಾತನ್ನು ಈ ಸಂದರ್ಭದಲ್ಲಿ ಹೇಳುತ್ತಾ, ಈ ಧನ ವಿನಿಯೋಗ ವಿಧೇಯಕಕ್ಕೆ ಮಾನ್ಯ ಸದಸ್ಯರುಗಳೆಲ್ಲರೂ ಒಪ್ಪಿಗೆ ಕೊಡಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1995ರ ಕರ್ನಾಟಕ ಧನ ವಿನಿಯೋಗ (ನಂ.2) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2, ರಿಂದ 3 ರವರೆಗೆ -

ಅಧ್ಯಕ್ಷರು: "ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಹಣಕಾಸು ಮತ್ತು ಯೋಜನಾ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1995ರ ಕರ್ನಾಟಕ ಧನವಿನಿಯೋಗ (ನಂ.2) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1995ರ ಧನ ವಿನಿಯೋಗ (ನಂ.2) ವಿಧೇಯಕವನ್ನು ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

2) ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕ 1995

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಹಣಕಾಸು ಮತ್ತು ಯೋಜನಾ ಸಚಿವರು) : ಮಾನ್ಯ ಅಧ್ಯಕ್ಷರೆ, 1995ರ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1995ರ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು : "ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಲಾಯಿತು)

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀಸಿದ್ಧರಾಮಯ್ಯ (ಹಣಕಾಸು ಮತ್ತು ಯೋಜನಾ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1995ರ